ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ: DEPARTMENT / SUBJECT: ಮಾನ್ಯ ಮುಖ್ಯಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ    ದಿನಾಂಕ : DATE : 5/11/2019

# ಸರಕಾರದ 100 ದಿನಗಳ ಸಾಧನೆ ಪುಸ್ತಕ ಇಂದು ಬಿಡುಗಡೆ

ವಿಶ್ವವಾಣಿ 5-11-19



**ಬೆಂಗಳೂರು:** ಬಿ.ಎಸ್.ಯಡಿಯೂರಪ್ಪ ನೇತೃತ್ವದ ಸರಕಾರ 100 ದಿನಗಳನ್ನು ಪೂರೈಸಿದ್ದು, 100 ದಿನಗಳ ಸರಕಾರದ ಸಾಧನೆಗಳನ್ನು ಜನರಿಗೆ ತಿಳಿಸಲು ನೂರು ಪುಟಗಳ ಪುಸ್ತಕವನ್ನು ನವೆಂಬರ್ 5ರಂದು ಬಿಡುಗಡೆ ಮಾಡಲಾಗುತ್ತದೆ. ಇಂದು ಯಡಿಯೂರಪ್ಪ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸರಕಾರದ ನೂರು ದಿನಗಳ ಸಾಧನೆ ಕುರಿತ '100 ದಿನ 100 ಸಾಧನೆ' ಪುಸ್ತಕ ಬಿಡುಗಡೆ ಮಾಡಲಿದ್ದಾರೆ. ಬಳಿಕ ಸುದ್ದಿಗೋಷ್ಠಿ ನಡೆಸಲಿದ್ದಾರೆ.

ನವೆಂಬರ್ 2ರಂದು ಯಡಿಯೂರಪ್ಪ ಸರಕಾರ ನೂರು ದಿನಗಳನ್ನು ಪೂರೈಸಿದೆ. ನವೆಂಬರ್ 11ರಂದು 15 ಕ್ಷೇತ್ರಗಳ ಉಪ ಚುನಾವಣೆ ನೀತಿ ಸಂಹಿತೆ ಜಾರಿಗೆ ಬರಲಿದೆ. ಅದಕ್ಕೂ ಮೊದಲು ಪುಸ್ತಕವನ್ನು ಬಿಡುಗಡೆ ಮಾಡಿ, ಇದನ್ನು ಮುಂದಿಟ್ಟುಕೊಂಡು ಪ್ರಚಾರ ನಡೆಸಲಾಗುತ್ತದೆ. ಪ್ರತಿ ಜಿಲ್ಲೆಗಳ ಉಸ್ತುವಾರಿ ಸಚಿವರು ಅವರ ಜಿಲ್ಲೆಗಳಲ್ಲಿ ಸಾಧನೆಯ ಪುಸ್ತಕವನ್ನು ಬಿಡುಗಡೆ ಮಾಡಲಿದ್ದಾರೆ. ಎಲ್ಲ ಇಲಾಖೆಯಲ್ಲಿ ಕೈಗೊಂಡ ಕಾರ್ಯಕ್ರಮಗಳನ್ನು ಸೇರಿಸಿ 100 ಪುಟದ ಪುಸ್ತಕವನ್ನು ಸಿದ್ಧಪಡಿಸಲಾಗಿದೆ.

ರಾಜ್ಯದಲ್ಲಿನ ಪ್ರವಾಹ ಮತ್ತು ಬರ ಪರಿಸ್ಥಿತಿ ಹಿನ್ನಲೆಯಲ್ಲಿ ನೂರು ದಿನ ತುಂಬಿದ ಕಾರ್ಯಕ್ರಮವನ್ನು ಸರಳವಾಗಿ ಮಾಡಲಾಗುತ್ತಿದೆ. ಸರಕಾರ ಏನೂ ಮಾಡುತ್ತಿಲ್ಲ ಎಂದು ಟೀಕಿಸುವ ವಿರೋಧ ಪಕ್ಷಗಳಿಗೆ ಪುಸ್ತಕದ ಮೂಲಕವೇ ಉತ್ತರ ಕೊಡಲು ಬಿಜೆಪಿ ಸರಕಾರ ಮುಂದಾಗಿದೆ. ಪ್ರವಾಹ ಸಂದರ್ಭದಲ್ಲಿ ಸರಕಾರ ಕೈಗೊಂಡ ಕ್ರಮಗಳು, ಬರ ಪರಿಹಾರ, ರೈತರಿಗಾಗಿ ಘೋಷಿಸಿದ ಯೋಜನೆಗಳು, ನೇಕಾರರ ಸಾಲಮನ್ನಾ, ಬೆಂಗಳೂರು ನಗರದ ಅಭಿವೃದ್ಧಿಗೆ ಕೈಗೊಂಡ ಕ್ರಮಗಳು ಮುಂತಾದ ವಿವರಗಳನ್ನು 100 ಪುಟಗಳ ಪುಸ್ತಕ ಒಳಗೊಂಡಿದೆ.